ಕರ್ನಾಟಕ ಸರ್ಕಾರ
ಭ್ರಷ್ಟಾಚಾರ ನಿಗ್ರಹ ದಳ

ದಿನಾಂಕ: 24/01/2019

## ಪತ್ರಿಕಾ ಪ್ರಕಟಣೆ

ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ನೆರಳೂರು ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿರವರು ತಮ್ಮ ಸಂಘದ ಆಡಳಿತ ಮಂಡಳಿಯ ಚುನಾವಣೆಯ ಖರ್ಚು ವೆಚ್ಚಗಳ ವೋಚರ್ ಕೋರಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಶ್ರೀ.ಹೇಮಚಂದ್ರ, ಎಸ್.ಡಿ.ಎ, ಸಹಕಾರ ಸೌಧ, ಉಪ ನಿಬಂಧಕರ ಕಛೇರಿ, ಮಲ್ಲೇಶ್ವರಂ, ಬೆಂಗಳೂರು ರವರು ವೋಚರ್ ಅನ್ನು ನೀಡಲು ರೂ.10,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:24/01/2019 ರಂದು ಶ್ರೀ ಹೇಮಚಂದ್ರ ರವರು ರೂ.9000/- ಲಂಚದ ಹಣವನ್ನು ಫಿರ್ಯಾದುದಾರರಿಂದ ಪಡೆದುಕೊಳ್ಳುವ ಸಂದರ್ಭದಲ್ಲಿ ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ಗ್ರಾಮಾಂತರ ಜಿಲ್ಲೆ ಪೊಲೀಸ್ ಠಾಣೆಯ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.